All India Radio: Bangalore
National Bulletin In Kannada
29.01.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಕೇಂದ್ರ ಹಣಕಾಸು ಸಚಿವರಿಂದ ಸಂಸತ್ತಿನಲ್ಲಿ ಇಂದು ೨೦೨೫-೨೬ರ ಆರ್ಥಿಕ ಸಮೀಕ್ಷೆ ಮಂಡನೆ
2. ನವದೆಹಲಿಯ ವಿಜಯ್ ಚೌಕ್‌ನಲ್ಲಿಂದು ೭೭ನೇ ಗಣರಾಜ್ಯೋತ್ಸವದ ಸಮಾರೋಪ ಸಮಾರಂಭ
3. ಸಕಲ ಸರ್ಕಾರಿ ಗೌರವಗಳೊಂದಿಗೆ ಇಂದು ಎನ್‌ಸಿಪಿ ನಾಯಕ ಅಜಿತ್ ಪವಾರ್ ಅಂತ್ಯಕ್ರಿಯೆ
4. ಟಿ-೨೦ ಕ್ರಿಕೆಟ್: ಭಾರತದ ವಿರುದ್ಧ ನ್ಯೂಜಿಲೆಂಡ್‌ಗೆ ೫೦ ರನ್‌ಗಳ ಜಯ

<><><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಸಂಸತ್ತಿನಲ್ಲಿ ೨೦೨೫-೨೬ರ ಆರ್ಥಿಕ ಸಮೀಕ್ಷೆಯನ್ನು ಮಂಡಿಸಲಿದ್ದಾರೆ. ಮುಖ್ಯ ಆರ್ಥಿಕ ಸಲಹೆಗಾರರ ಮಾರ್ಗದರ್ಶನದಲ್ಲಿ ಕೇಂದ್ರ ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆಯು ಈ ದಾಖಲೆಯನ್ನು ಸಿದ್ಧಪಡಿಸಿದೆ. ಆರ್ಥಿಕ ಸಮೀಕ್ಷೆಯು ದೇಶದ ಪ್ರಸ್ತುತ ಆರ್ಥಿಕ ಸ್ಥಿತಿ ಮತ್ತು ಭವಿಷ್ಯದ ದೃಷ್ಟಿಕೋನದ ಸಮಗ್ರ ವಿಮರ್ಶೆಯಾಗಿದೆ. ೨೦೨೬-೨೭ರ ಕೇಂದ್ರ ಬಜೆಟ್ ಅನ್ನು ಇದೇ ಭಾನುವಾರ ಮಂಡಿಸಲಾಗುವುದು.

<><><><>

ಭಾರತ ಇಂಧನ ಸಪ್ತಾಹದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ನವದೆಹಲಿಯ ಲೋಕ ಕಲ್ಯಾಣ್ ಮಾರ್ಗದಲ್ಲಿರುವ ತಮ್ಮ ನಿವಾಸದಲ್ಲಿ ಜಾಗತಿಕ ಇಂಧನ ವಲಯದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು. ಭಾರತ, ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವತ್ತ ವೇಗವಾಗಿ ಮುನ್ನಡೆಯುತ್ತಿದೆ ಮತ್ತು ಜಾಗತಿಕ ಇಂಧನ ಬೇಡಿಕೆ-ಪೂರೈಕೆ ಸಮತೋಲನದಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತಿದೆ ಎಂದು ಪ್ರಧಾನಿ ನರೇಂದ್ರ

ಮೋದಿ ಹೇಳಿದರು. ಸಂವಾದದ ಸಮಯದಲ್ಲಿ, ಅವರು ಭಾರತದ ಇಂಧನ ವಲಯದಲ್ಲಿನ ಗಮನಾರ್ಹ ಹೂಡಿಕೆ ಅವಕಾಶಗಳತ್ತ ಗಮನ ಸೆಳೆದರು. ಸರ್ಕಾರವು ಪರಿಚಯಿಸಿದ ಹೂಡಿಕೆದಾರ ಸ್ನೇಹಿ ನೀತಿ ಸುಧಾರಣೆಗಳನ್ನು ಉಲ್ಲೇಖಿಸಿ, ಪರಿಶೋಧನೆ ಮತ್ತು ಉತ್ಪಾದನೆಯಲ್ಲಿ ಸುಮಾರು ೧೦೦ ಶತಕೋಟಿ ಅಮೆರಿಕನ್ ಡಾಲರ್‌ಗಳ ಹೂಡಿಕೆಗೆ ಅವಕಾಶ ಹಾಗೂ ಜೈವಿಕ ಅನಿಲ ಕ್ಷೇತ್ರದಲ್ಲಿ ೩೦ ಶತಕೋಟಿ ಅಮೆರಿಕನ್ ಡಾಲರ್ ಅವಕಾಶವಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಉನ್ನತ ಮಟ್ಟದ ದುಂಡುಮೇಜಿನ ಸಭೆಯಲ್ಲಿ ಪ್ರಮುಖ ಜಾಗತಿಕ ಮತ್ತು ಭಾರತೀಯ ಇಂಧನ ಕಂಪನಿಗಳ ೨೭ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಭಾಗವಹಿಸಿದ್ದರು.

<><><><>

೭೭ನೇ ಗಣರಾಜ್ಯೋತ್ಸವದ ಸಮಾರೋಪ ಸಮಾರಂಭವನ್ನು ಇಂದು ನವದೆಹಲಿಯ ವಿಜಯ್ ಚೌಕ್‌ನಲ್ಲಿ ನಡೆಸಲಾಗುತ್ತದೆ. ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಕೇಂದ್ರ ಸಚಿವರು ಭಾಗವಹಿಸಲಿದ್ದಾರೆ. ಇದು ಭಾರತೀಯ ಸೇನೆ, ಭಾರತೀಯ ನೌಕಾಪಡೆ, ಭಾರತೀಯ ವಾಯುಪಡೆ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಬ್ಯಾಂಡ್‌ಗಳನ್ನು ಒಳಗೊಂಡಿರಲಿದೆ. ಈ ವರ್ಷ, ವಿಜಯ್ ಚೌಕ್‌ನ ಆಸನ ವ್ಯವಸ್ಥೆಗಳಿಗೆ ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವ ಭಾರತೀಯ ಸಂಗೀತ ವಾದ್ಯಗಳ ಹೆಸರುಗಳನ್ನು ಇಡಲಾಗಿದೆ.

<><><><>

ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಮತ್ತು ಉಜ್ಬೇಕಿಸ್ತಾನ್ ವಿದೇಶಾಂಗ ಸಚಿವ ಭಕ್ತಿಯೋರ್ ಸೈಡೋವ್ ದೂರವಾಣಿ ಸಂಭಾಷಣೆ ನಡೆಸಿ, ದ್ವಿಪಕ್ಷೀಯ ಸಹಕಾರದ ವಿವಿಧ ಆಯಾಮಗಳನ್ನು ಪರಿಶೀಲಿಸಿದರು. ಭಾರತ ಮತ್ತು ಉಜ್ಬೇಕಿಸ್ತಾನ್ ನಡುವಿನ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಮತ್ತು ಸಹಕಾರವನ್ನು ಮುನ್ನಡೆಸುವ ಮಾರ್ಗಗಳ ಕುರಿತು ಚರ್ಚಿಸಲಾಯಿತು ಎಂದು ಡಾ. ಜೈಶಂಕರ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳಲ್ಲಿನ ಸಕಾರಾತ್ಮಕ ಆವೇಗವು ಭವಿಷ್ಯದಲ್ಲಿಯೂ ಮುಂದುವರಿಯುತ್ತದೆ ಎಂದು ವಿದೇಶಾಂಗ ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

<><><><>

ಬಿಹಾರದಲ್ಲಿ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆಯನ್ನು ಪ್ರಶ್ನಿಸಿ ಸಲ್ಲಿಸಲಾದ ೧೯ ಅರ್ಜಿಗಳ ಅಂತಿಮ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಪುನರಾರಂಭಿಸಿದೆ. ಹೆಸರುಗಳ ಸೇರ್ಪಡೆ ಮತ್ತು ತೆಗೆದು ಹಾಕುವುದು, ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯದ ಭಾಗವಾಗಿದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ನ್ಯಾಯಪೀಠ ಈ ಅರ್ಜಿಗಳ ವಿಚಾರಣೆ ನಡೆಸುತ್ತಿದೆ.

<><><><>

ಮಹಾರಾಷ್ಟ್ರ ಉಪಮುಖ್ಯಮಂತ್ರಿ, ಎನ್‌ಸಿಪಿ ನಾಯಕ ಅಜಿತ್ ಪವಾರ್ ಅವರ ಅಂತ್ಯಕ್ರಿಯೆ ಇಂದು ಬೆಳಗ್ಗೆ ೧೧ ಗಂಟೆ ಸುಮಾರಿಗೆ ಪುಣೆ ಜಿಲ್ಲೆಯ ಬಾರಾಮತಿಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಲಿದೆ. ವಿಮಾನ ಅಪಘಾತದಲ್ಲಿ ನಿನ್ನೆ ಅಜಿತ್ ಪವಾರ್ ನಿಧನರಾದರು. ಪವಾರ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಬಾರಾಮತಿಗೆ ಭೇಟಿ ನೀಡಲಿದ್ದಾರೆ. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ರಾಜ್ಯ ಸಚಿವ ಸಂಪುಟದ ಸದಸ್ಯರು ಸಹ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ. ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಮರಣದ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಸರ್ಕಾರ ಸಾರ್ವಜನಿಕ ರಜೆ ಘೋಷಿಸಿದೆ. ಗೌರವ ಸೂಚಕವಾಗಿ ಎಲ್ಲಾ ಶಾಲೆಗಳು ನಾಳೆಯವರೆಗೆ ಮುಚ್ಚಲ್ಪಡುತ್ತವೆ. ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮೂರು ದಿನಗಳ ಶೋಕಾಚರಣೆಯನ್ನು ಘೋಷಿಸಿದ್ದಾರೆ. ಈ ಸಮಯದಲ್ಲಿ ಎಲ್ಲಾ ರಾಜ್ಯದ ಸರ್ಕಾರಿ ಕಚೇರಿಗಳು ಮತ್ತು ಶಿಕ್ಷಣ ಸಂಸ್ಥೆಗಳು ಮುಚ್ಚಲ್ಪಡುತ್ತವೆ. ಸರ್ಕಾರಿ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧಕ್ಕೆ ಹಾರಿಸಲಾಗುತ್ತಿದೆ.

<><><><>

ನವದೆಹಲಿಯಲ್ಲಿ ನಿನ್ನೆ ಭಾರತದ ವಿಶಿಷ್ಟ ಗುರುತಿನ ಪ್ರಾಧಿಕಾರದ ದಿನದಂದು ಆಧಾರ್ ಅಪ್ಲಿಕೇಶನ್ ಅನ್ನು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಜಿತಿನ್ ಪ್ರಸಾದ್ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಆಧಾರ್ ಡಿಜಿಟಲ್ ನಾವೀನ್ಯತೆ ಮತ್ತು ಎಲ್ಲರನ್ನೂ ಒಳಗೊಂಡ ಆಡಳಿತ ಭಾರತದ ಪ್ರಬಲ ಜಾಗತಿಕ ಉದಾಹರಣೆಗಳಲ್ಲಿ ಒಂದಾಗಿದೆ ಎಂದು ಹೇಳಿದರು. ಆಧಾರ್ ಈಗ ೧೪೩ ಕೋಟಿಗೂ ಹೆಚ್ಚು ನಾಗರಿಕರನ್ನು ಒಳಗೊಂಡಿದೆ. ಅಲ್ಲದೇ ಅಭಿವೃದ್ಧಿ ಹೊಂದಿದ ರಾಷ್ಟ್ರಗಳು ಸೇರಿದಂತೆ ಜಗತ್ತಿಗೆ

ಭಾರತವು ಸುರಕ್ಷಿತ ಡಿಜಿಟಲ್ ಗುರುತಿನ ವ್ಯವಸ್ಥೆಯನ್ನು ಸಾಟಿಯಿಲ್ಲದ ಪ್ರಮಾಣದಲ್ಲಿ ನೀಡಬಲ್ಲದು ಎಂಬುದನ್ನು ತೋರಿಸಿದೆ ಎಂದರು. ಅನೇಕ ದೇಶಗಳು ಭಾರತದೊಂದಿಗೆ ಪಾಲುದಾರಿಕೆ ಮಾಡಿಕೊಳ್ಳಲು ಮತ್ತು ಆಧಾರ್ ಮಾದರಿಯನ್ನು ಅಳವಡಿಸಿಕೊಳ್ಳಲು ಆಸಕ್ತಿ ತೋರಿಸುತ್ತಿವೆ ಎಂದು ಅವರು ತಿಳಿಸಿದರು. ಭಾರತವನ್ನು ಈಗ ವಿಶ್ವದ ಡಿಜಿಟಲ್ ಮತ್ತು ಕೌಶಲ್ಯ ರಾಜಧಾನಿಯಾಗಿ ಗುರುತಿಸಲಾಗುತ್ತಿದೆ. ಮುಂದಿನ ತಿಂಗಳು ಭಾರತದಲ್ಲಿ ನಡೆಯಲಿರುವ ಎಐ ಇಂಪ್ಯಾಕ್ಟ್ ಶೃಂಗಸಭೆಯು ಕೃತಕ ಬುದ್ಧಿಮತ್ತೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಿಗೆ ಜಾಗತಿಕ ಸೇವಾ ಪೂರೈಕೆದಾರರಾಗಿ ದೇಶವನ್ನು ಪ್ರತಿನಿಧಿಸುತ್ತದೆ ಎಂದು ಸಚಿವ ಜಿತಿನ್ ಪ್ರಸಾದ್ ಹೇಳಿದರು.

<><><><>

ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು ಎಲೆಕ್ಟ್ರಾನಿಕ್ಸ್ ವಲಯವನ್ನು ಮಹತ್ತರವಾಗಿ ಉತ್ತೇಜಿಸುವ ನಿರೀಕ್ಷೆಯಿದೆ ಎಂದು ಘಾಜಿಯಾಬಾದ್ ಪ್ರಿಸಿಷನ್ ಪ್ರಾಡಕ್ಟ್ಸ್ ಲಿಮಿಟೆಡ್‌ನ ಮುಖ್ಯ ಹಣಕಾಸು ಅಧಿಕಾರಿ ಡಾ. ರಾಜೇಶ್ ಅಗರ್ವಾಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಭಾರತ- ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು ದೇಶಕ್ಕೆ ಉತ್ತಮ ಅವಕಾಶವನ್ನು ತರುತ್ತದೆ. ಏಕೆಂದರೆ ಇದು ಕೇವಲ ಒಂದು ದಾಖಲೆಯಾಗಿರದೆ, ದೇಶದ ಆರ್ಥಿಕತೆಯನ್ನು ಬಲಪಡಿಸುವ ಕಾರ್ಯತಂತ್ರದ ಪಾಲುದಾರಿಕೆಯಾಗಿದೆ ಎಂದು ಹೇಳಿದ್ದಾರೆ. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು ತೋಟಗಾರಿಗೆ ಬೆಳೆಗಳು ವಿಶೇಷವಾಗಿ ಕಾಫಿಗೆ ಪ್ರಯೋಜನಕಾರಿಯಾಗಿದೆ ಎಂದು ಭಾರತೀಯ ಕಾಫಿ ರಫ್ತುದಾರರ ಸಂಘದ ಅಧ್ಯಕ್ಷ ರಮೇಶ್ ರಾಜಾ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಐರೋಪ್ಯ ಒಕ್ಕೂಟ ರಾಷ್ಟ್ರಗಳು ಕಾಫಿಗೆ ಪ್ರಮುಖ ಮಾರುಕಟ್ಟೆಯಾಗಿವೆ. ಈ ಒಪ್ಪಂದವು ಕಾಫಿ ಮೇಲಿನ ಸುಂಕವನ್ನು ಶೂನ್ಯಕ್ಕೆ ಇಳಿಸುವುದರಿಂದ, ಭಾರತವು ಜಾಗತಿಕವಾಗಿ ಇತರ ದೊಡ್ಡ ಕಾಫಿ ಮಾರುಕಟ್ಟೆಗಳೊಂದಿಗೆ ಸ್ಪರ್ಧಿಸಲಿದೆ ಎಂದು ಹೇಳಿದ್ದಾರೆ.

<><><><>

ರೆಡ್ ನೋಟಿಸ್ ಹಿನ್ನೆಲೆಯಲ್ಲಿ ಕೇಂದ್ರ ತನಿಖಾ ದಳ-ಸಿಬಿಐ, ನಿನ್ನೆ ಶ್ರೀಧರನ್ ಸುಬ್ರಮಣಿಯಂ, ಪ್ರತಿಫ್ ಕುಮಾರ್ ಸೆಲ್ವರಾಜ್ ಮತ್ತು ನವೀಂದ್ರನ್ ರಾಜ್ ಕುಮಾರಸನ್ ಅವರನ್ನು ಭಾರತದಿಂದ

ಮಲೇಷ್ಯಾಕ್ಕೆ ಗಡೀಪಾರು ಮಾಡಿದೆ. ಸಂಘಟಿತ ಅಪರಾಧ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಈ ಆರೋಪಿಗಳು ಮಲೇಷ್ಯಾ ತನಿಖಾ ಸಂಸ್ಥೆಗಳಿಗೆ ಬೇಕಾಗಿದ್ದಾರೆ ಎಂದು ಸಿಬಿಐ ತಿಳಿಸಿದೆ. ಈ ಕಾರ್ಯಾಚರಣೆಯ ಯಶಸ್ಸು ಕಾನೂನು ಜಾರಿ ಕ್ಷೇತ್ರದಲ್ಲಿ ಭಾರತ ಮತ್ತು ಮಲೇಷ್ಯಾ ನಡುವಿನ ಬಲವಾದ ದ್ವಿಪಕ್ಷೀಯ ಸಹಕಾರವನ್ನು ಪ್ರತಿಬಿಂಬಿಸುತ್ತದೆ. ಇದು ಅಂತಾರಾಷ್ಟ್ರೀಯ ಅಪರಾಧಗಳನ್ನು ತಗ್ಗಿಸುವಲ್ಲಿ ಇಂಟರ್‌ಪೋಲ್‌ಗಳ ಪರಿಣಾಮಕಾರಿತ್ವವನ್ನು ಒತ್ತಿಹೇಳುತ್ತದೆ.

<><><>

ವಿಶಾಖಪಟ್ಟಣದಲ್ಲಿ ನಿನ್ನೆ ರಾತ್ರಿ ನಡೆದ ಪುರುಷರ ಕ್ರಿಕೆಟ್‌ನಲ್ಲಿ, ಭಾರತ ತಂಡ, ಐದು ಪಂದ್ಯಗಳ ಸರಣಿಯ ನಾಲ್ಕನೇ ಟಿ-೨೦ ಅಂತಾರಾಷ್ಟ್ರೀಯ ಪಂದ್ಯದಲ್ಲಿ ನ್ಯೂಜಿಲೆಂಡ್ ವಿರುದ್ಧ ೫೦ ರನ್‌ಗಳಿಂದ ಪರಾಭವಗೊಂಡಿದೆ. ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್, ಟಿಮ್ ಸೀಫರ್ಟ್ ಅವರ ೬೨ ರನ್ ಮತ್ತು ಡೆವೊನ್ ಕಾನ್ವೇ ಅವರ ೪೪ ರನ್‌ಗಳ ನೆರವಿನಿಂದ ನಿಗದಿತ ೨೦ ಓವರ್‌ಗಳಲ್ಲಿ ಏಳು ವಿಕೆಟ್ ನಷ್ಟಕ್ಕೆ ೨೧೫ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಭಾರತ ತಂಡ, ೧೮.೪ ಓವರ್‌ಗಳಲ್ಲಿ ೧೬೫ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತದ ಪರ ಶಿವಂ ದುಬೆ ೬೫ ಮತ್ತು ರಿಂಕು ಸಿಂಗ್ ೩೯ ರನ್ ಗಳಿಸಿದರು. ನ್ಯೂಜಿಲೆಂಡ್ ಪರ ನಾಯಕ ಮಿಚೆಲ್ ಸ್ಯಾಂಟ್ನರ್ ಮೂರು ವಿಕೆಟ್‌ಗಳನ್ನು ಕಬಳಿಸಿದರು. ಟಿಮ್ ಸೀಫರ್ಟ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಈ ಸೋಲಿನ ಹೊರತಾಗಿಯೂ ಭಾರತ ಐದು ಪಂದ್ಯಗಳ ಟಿ-೨೦ ಸರಣಿಯಲ್ಲಿ ೩-೧ ರಿಂದ ಮುನ್ನಡೆಯಲ್ಲಿದೆ.

<><><>

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ವುಮೆನ್ಸ್ ಪ್ರೀಮಿಯರ್ ಲೀಗ್-ಡಬ್ಲೂಪಿಎಲ್ ಟಿ-೨೦ ಕ್ರಿಕೆಟ್‌ನ ೧೮ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು-ಆರ್‌ಸಿಬಿ ಮತ್ತು ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆ ೩೦ ನಿಮಿಷಕ್ಕೆ ಪ್ರಾರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>